**ಹಿರಿಯ ದಿವಾಣಿ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ತಿ. ನರಸೀಪುರ**

**ಸಿಸಿ ಸಂಖ್ಯೆ: 2071/2022**

ಚಾ.ಸಾ-01, ಪ್ರಾ.ಸಾ-01

| | | |
|---|---|---|
| ಹೆಸರು | : | ಧನುಷ್ |
| ತಂದೆಯ ಹೆಸರು | : | ಲೇಟ್ ವಿಷಕಂಠ |
| ವಯಸ್ಸು | : | 30 |
| ವೃತ್ತಿ | : | ಖಾಸಗಿ ಕೆಲಸ |
| ವಾಸ | : | ತಿ. ನರಸೀಪುರ |

**ದಿನಾಂಕ 19.02.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

ಚಾಸಾ-2 ನನ್ನ ಅಣ್ಣ. ಆರೋಪಿತರ ಪರಿಚಯವಿದೆ.

ಆರೋಪಿತರು ನನ್ನ ಅಣ್ಣನ ಜೊತೆ ಗಲಾಟೆ ಮಾಡಿಲ್ಲ. ಆತನನ್ನು ಅಡ್ಡಗಟ್ಟಿಲ್ಲ. ಆತನಿಗೆ ಅವಾಚ್ಯ ಶಬ್ದಗಳಿಂದ ಬೈದಿಲ್ಲ. ಆತನಿಗೆ ಹಲ್ಲೆ ಮಾಡಿಲ್ಲ ಮತ್ತು ಕೊಲೆ ಬೆದರಿಕೆ ಹಾಕಿಲ್ಲ. ನಾನು ಪೊಲೀಸರಿಗೆ ದೂರು ಮತ್ತು ಮುಂದುವರೆದ ಹೇಳಿಕೆ ನೀಡಿಲ್ಲ. ಪೊಲೀಸರು ನನ್ನ ಸಮಕ್ಷಮ ಪಂಚನಾಮ ಜರುಗಿಸಿಲ್ಲ ಮತ್ತು ಏನನ್ನೂ ಜಪ್ತಿಪಡಿಸಿಲ್ಲ.

ನನಗೆ ಈಗ ತೋರಿಸಿದ ದಾಖಲೆಗಳಲ್ಲಿ ನನ್ನ ಸಹಿಗಳು ಇವೆ. ಆ ದಾಖಲೆಗಳು ದೂರು ಮತ್ತು ಪಂಚನಾಮಗಳಾಗಿದ್ದು, ಅವುಗಳನ್ನು ಕ್ರಮವಾಗಿ ನಿಪಿ.1 ಮತ್ತು 2 ಎಂದು ಮತ್ತು ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ನಿಪಿ.1(ಎ) ಮತ್ತು 2(ಎ) ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರ ಕೋರಿಕೆಯನ್ನು ಪರಿಗಣಿಸಿ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

ದಿನಾಂಕ 20.06.2022 ರಂದು ರಾತ್ರಿ 7.45 ಗಂಟೆ ಸಮಯದಲ್ಲಿ ತಿ. ನರಸೀಪುರ ಪಟ್ಟಣದ ಲಿಂಕ್ ರಸ್ತೆಯ ಸಮೀಪ ಇರುವ ಜನಪ್ರಿಯ ಅಂಗಡಿಯ ಮುಂಭಾಗ, ಆರೋಪಿತರು ನನ್ನ ಅಣ್ಣನನ್ನು ಅಡ್ಡಗಟ್ಟಿ ಆತನಿಗೆ ಅವಾಚ್ಯ ಶಬ್ದಗಳಿಂದ ಬೈದು, 2ನೇ ಆರೋಪಿತ ತನ್ನ ಕೈಗಳಿಂದ ನನ್ನ ಅಣ್ಣನ ಕಪಾಲಕ್ಕೆ ಮತ್ತು ಮೈಕೈಗೆ ಹೊಡೆದು, 3ನೇ ಆರೋಪಿತ ಆತನನ್ನು ಕೆಳಕ್ಕೆ ನೂಕಿ ಆತನಿಗೆ ಸಾದಾ ಸ್ವರೂಪದ ನೋವು ಮಾಡಿದ್ದು, 1ನೇ ಆರೋಪಿತ ಸೈಜುಕಲ್ಲಿನಿಂದ ಆತನ ಬಲಗೈಗೆ ಹೊಡೆದು ತೀವ್ರ ಸ್ವರೂಪದ ಗಾಯಪಡಿಸಿ, ಆರೋಪಿತರು ಆತನಿಗೆ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಹಾಗಾಗಿ ನಿಪಿ-1 ರಂತೆ ದೂರನ್ನು ನಾನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿನಾಂಕ 21.06.2022 ರಂದು ಬೆಳಿಗ್ಗೆ 9.00 ರಿಂದ 9.45 ಗಂಟೆ ಸಮಯದಲ್ಲಿ ನಾನು ತೋರಿಸಿದಂತೆ ಪೊಲೀಸರು ಘಟನಾ ಸ್ಥಳದಲ್ಲಿ ಚಾಸಾ-5 ಮತ್ತು 6 ರವರ ಸಮಕ್ಷಮ ಪಂಚನಾಮವನ್ನು ನಿಪಿ.2 ರಂತೆ ಜರುಗಿಸಿ, ಕಲ್ಲನ್ನು ಜಪ್ತಿಪಡಿಸಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ 20.06.2022 ರಂದು ನಾನು ಘಟನೆಯ ಕುರಿತು ಪೊಲೀಸರಿಗೆ ಮುಂದುವರೆದ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅದನ್ನು ತಿರಸ್ಕರಿಸಿದ್ದರಿಂದ, ಅದನ್ನು ನಿಪಿ.3 ಎಂದು ಗುರುತಿಸಲಾಯಿತು. ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ ಇರುವುದಿಲ್ಲ.**

**ಮರು ವಿಚಾರಣೆ ಇರುವುದಿಲ್ಲ.**

(ತೆ ನ್ಯಾದಲ್ಲಿ ಬೆರಳಚ್ಚುಗೊಳಿಸಲಾಯಿತು)

ಓ ಹೇ ಕೇ ಸರಿ ಇದೆ

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದ. ತಿ.ನರಸೀಪುರ**

**ಹಿರಿಯ ದಿವಾಣಿ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ತಿ. ನರಸೀಪುರ**

**ಸಿಸಿ ಸಂಖ್ಯೆ: 2071/2022**

ಚಾ.ಸಾ–02, ಪ್ರಾ.ಸಾ–02

| | | |
|---|---|---|
| ಹೆಸರು | : | ಧನಂಜಯ |
| ತಂದೆಯ ಹೆಸರು | : | ಲೇಟ್ ವಿಷಕಂಠ |
| ವಯಸ್ಸು | : | 32 |
| ವೃತ್ತಿ | : | ಖಾಸಗಿ ಕೆಲಸ |
| ವಾಸ | : | ತಿ. ನರಸೀಪುರ |

**ದಿನಾಂಕ 19.02.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

ಪ್ರಾಸಾ–1 ನನ್ನ ತಮ್ಮ. ಆರೋಪಿತರ ಪರಿಚಯವಿದೆ.

ಆರೋಪಿತರು ನನ್ನ ಜೊತೆ ಗಲಾಟೆ ಮಾಡಿಲ್ಲ. ನನ್ನನ್ನು ಅಡ್ಡಗಟ್ಟಿಲ್ಲ. ನನಗೆ ಅವಾಚ್ಯ ಶಬ್ದಗಳಿಂದ ಬೈದಿಲ್ಲ. ನನಗೆ ಹಲ್ಲೆ ಮಾಡಿಲ್ಲ ಮತ್ತು ಕೊಲೆ ಬೆದರಿಕೆ ಹಾಕಿಲ್ಲ. ನಾನು ಪೊಲೀಸರಿಗೆ ಹೇಳಿಕೆ ನೀಡಿಲ್ಲ.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರ ಕೋರಿಕೆಯನ್ನು ಪರಿಗಣಿಸಿ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

ದಿನಾಂಕ 20.06.2022 ರಂದು ರಾತ್ರಿ 7.45 ಗಂಟೆ ಸಮಯದಲ್ಲಿ ತಿ. ನರಸೀಪುರ ಪಟ್ಟಣದ ಲಿಂಕ್ ರಸ್ತೆಯ ಸಮೀಪ ಇರುವ ಜನಪ್ರಿಯ ಅಂಗಡಿಯ ಮುಂಭಾಗ, ಆರೋಪಿತರು ನನ್ನನ್ನು ಅಡ್ಡಗಟ್ಟಿ, ನನಗೆ ಅವಾಚ್ಯ ಶಬ್ದಗಳಿಂದ ಬೈದು,

2ನೇ ಆರೋಪಿತ ತನ್ನ ಕೈಗಳಿಂದ ನನ್ನ ಕಪಾಲಕ್ಕೆ ಮತ್ತು ಮೈಕೈಗೆ ಹೊಡೆದು, 3ನೇ ಆರೋಪಿತ ನನ್ನನ್ನು ಕೆಳಕ್ಕೆ ನೂಕಿ ನನಗೆ ಸಾದಾ ಸ್ವರೂಪದ ನೋವು ಮಾಡಿದ್ದು, 1ನೇ ಆರೋಪಿತ ಸೈಜುಕಲ್ಲಿನಿಂದ ನನ್ನ ಬಲಗೈಗೆ ಹೊಡೆದು ತೀವ್ರ ಸ್ವರೂಪದ ಗಾಯಪಡಿಸಿ, ಆರೋಪಿತರು ನನಗೆ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ 25.06.2022 ರಂದು ನಾನು ಘಟನೆಯ ಕುರಿತು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅದನ್ನು ತಿರಸ್ಕರಿಸಿದ್ದರಿಂದ, ಅದನ್ನು ನಿಪಿ.4 ಎಂದು ಗುರುತಿಸಲಾಯಿತು. ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ ಇರುವುದಿಲ್ಲ.**

**ಮರು ವಿಚಾರಣೆ ಇರುವುದಿಲ್ಲ.**

(ತೆ ನ್ಯಾದಲ್ಲಿ ಬೆರಳಚ್ಚುಗೊಳಿಸಲಾಯಿತು)

**ಓ ಹೇ ಕೇ ಸರಿ ಇದೆ** **ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದ. ತಿ.ನರಸೀಪುರ**